ಅ) ಶಿವಮೊಗ್ಗ ಗಾಜನೂರು ಬಳಿ ತುಂಗಾ ಮೇಲ್ದಂಡೆ ಯೋಜನೆ ಸಲುವಾಗಿ ಅರಣ್ಯ ಇಲಾಖೆಗೆ ಸೇರಿದ 400 ಹೆಕ್ಟೇರ್ ಭೂಮಿಯನ್ನು ವಶಪಡಿಸಲು ಕೇಂದ್ರ ಸರ್ಕಾರದ ಪರಿಸರ ಇಲಾಖೆ ಮತಿಯಿಂದ ಅನುಮತಿ ನಿರಾಕರಿಸಲಾಗಿದೆಯೇ?

ಆ) ಹಾಗಿದ್ದಲ್ಲಿ ಈ ಯೋಜನೆಯ ಬಗ್ಗೆ ಸರ್ಕಾರದ ಕ್ರಮ ಏನು ವಿವರ ತಿಳಿಸುವುದು?

ಶ್ರೀ ಹೆಚ್.ಕೆ. ಪಾಟೀಲ್ (ಜಲ ಸಂಪನ್ಮೂಲ ಸಚಿವರು) :

ಅ) ಶಿವಮೊಗ್ಗ ತಾ: ಗಾಜನೂರಿನ ಬಳಿ ನಿರ್ಮಿಸಲಾಗುತ್ತಿರುವ ತುಂಗಾ ಮೇಲ್ದಂಡೆ ಯೋಜನೆಗಾಗಿ 449.55 ಹೆ. ಅರಣ್ಯ ಪ್ರದೇಶವನ್ನು ನೀರಾವರಿ ಕಾರ್ಯಕ್ಕಾಗಿ ಬದಲೀಕರಣಗೊಳಿಸಲು ಕರ್ನಾಟಕ ಸರ್ಕಾರದ ಅರಣ್ಯ, ಪರಿಸರ ಹಾಗೂ ಜೀವಿ ಪರಿಸ್ಥಿತಿ ಶಾಸ್ತ್ರ ಇಲಾಖೆಯಿಂದ ಸಲ್ಲಿಸಲ್ಪಟ್ಟಿದ್ದ ಪ್ರಸ್ತಾವನೆಗೆ ಕೇಂದ್ರ ಸರ್ಕಾರದ ಅರಣ್ಯ ಮತ್ತು ಪರಿಸರ ಇಲಾಖೆಯು ಕೆಲವು ಸ್ಪಷ್ಟೀಕರಣ ಕೋರಿದ್ದು ಸದ್ಯದಲ್ಲಿಯೇ ಸ್ಪಷ್ಟೀಕರಣವನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುವುದು.

ಆ) ಸರ್ವೋಚ್ಚ ನ್ಯಾಯಾಲಯವು ಸಂರಕ್ಷಿತ ಅರಣ್ಯ ಪ್ರದೇಶದ ಬಿಡುಗಡೆಯ ಬಗ್ಗೆ ವಿಧಿಸಿರುವ ನಿಷೇಧವನ್ನು ತೆರವುಗೊಳಿಸುವ ಪ್ರಾರ್ಥನೆಯೊಂದಿಗೆ ಸರ್ವೋಚ್ಚ ನ್ಯಾಯಾಲಯದಲ್ಲಿ ಮಧ್ಯಂತರ ಅರ್ಜಿಯನ್ನು ಸಲ್ಲಿಸಲಾಗಿದೆ. ಈ ನಿಟ್ಟಿನಲ್ಲಿ ಮುಂದುವರಿಸಲಾದ ಪ್ರಯತ್ನವಾಗಿ ಕೇಂದ್ರ ಸರ್ಕಾರದ ಅರಣ್ಯ ಮತ್ತು ಪರಿಸರ ಇಲಾಖೆಯು ನಿಯೋಜಿಸಿದ್ದ ಇಂಡಿಯನ್ ಬೋರ್ಡ್ ಆಫ್ ವೈಲ್ಡ್ ಲೈಫ್‌ನ ಸದಸ್ಯರು ಸ್ಥಳ ಪರಿಶೀಲನೆಯನ್ನು ದಿ: 25-04-2002 ರಂದು ಕೈಗೊಂಡಿದ್ದು ವರದಿಯನ್ನು ಸರ್ವೋಚ್ಚ ನ್ಯಾಯಾಲಯಕ್ಕೆ ಸಲ್ಲಿಸಿದ ಕೂಡಲೇ ಸದರಿ ಅರಣ್ಯ ಪ್ರದೇಶದ ಬಿಡುಗಡೆಗೆ ಅನುಮತಿಯನ್ನು ಪಡೆಯಲು ಎಲ್ಲಾ ಕ್ರಮವನ್ನು ಜರುಗಿಸಲಾಗುವುದು.

ಶಿವಮೊಗ್ಗ ತಾಲ್ಲೂಕು ವ್ಯಾಪ್ತಿಯಲ್ಲಿ ಹಳದಿ ಪಡಿತರ ಚೀಟಿ ವಿತರಣೆ

696(849) ಶ್ರೀ ಚಂದ್ರ ಶೇಖರಪ್ಪ ಹೆಚ್.ಎಂ.(ಶಿವಮೊಗ್ಗ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಶಿವಮೊಗ್ಗ ತಾಲ್ಲೂಕು ವ್ಯಾಪ್ತಿಯಲ್ಲಿ ನಗರ ಹಾಗೂ ಗ್ರಾಮಾಂತರ ಪ್ರದೇಶದ ಜನರಿಗೆ ಹಳದಿ ಪಡಿತರ ಚೀಟಿ ನೀಡುವ ಬಗ್ಗೆ ನಡೆಸುತ್ತಿರುವ ಸಮೀಕ್ಷೆ ಕಾರ್ಯವು ಪೂರ್ಣಗೊಂಡಿದೆಯೇ?

ಆ) ಈ ಯೋಜನೆ ಅಡಿಯಲ್ಲಿ ಎಷ್ಟು ಜನರಿಗೆ ಹಳದಿ ಪಡಿತರ ಚೀಟಿಗಳನ್ನು ವಿತರಿಸಲಾಗುವುದು?

ಇ) ಈ ಯೋಜನೆಯನ್ನು ನಗರ ಪ್ರದೇಶದ ಕೊಳಚೆ ಪ್ರದೇಶದ ಜನರಿಗೆ ಮಾತ್ರ ಸೀಮಿತಗೊಳಿಸಲಾಗಿದೆಯೇ ಅಥವಾ ಕೊಳಚೆ ಪ್ರದೇಶ ಹೊರತು ಪಡಿಸಿ ಇತರೇ ಪ್ರದೇಶಗಳಲ್ಲಿ ವಾಸ ಮಾಡುತ್ತಿರುವ ಬಡತನ ರೇಖೆಗಿಂತ ಕೆಳಗಿರುವ ಜನರಿಗೂ ವಿಸ್ತರಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು):

ಶ್ರೀ ರಾಮಲಿಂಗ ರೆಡ್ಡಿ (ಆಹಾರ ಮತ್ತು ನಾಗರಿಕ ಸರಬರಾಜು ಸಚಿವರು) :

ಅ) ಪೂರ್ಣಗೊಂಡಿರುವುದಿಲ್ಲ.

ಆ) ಸಮೀಕ್ಷೆ ಪೂರ್ಣಗೊಂಡ ನಂತರ ನಿರ್ದಿಷ್ಟ ಸಂಖ್ಯೆಯು ತಿಳಿದು ಬರುವುದು.

ಇ) ಕೊಳಚೆ ಪ್ರದೇಶದ ಜನರಿಗೆ ಮಾತ್ರ ಸೀಮಿತಗೊಳಿಸಿದೆ. ಇತರೆ ಪ್ರದೇಶಗಳಲ್ಲಿ ವಾಸ ಮಾಡುತ್ತಿರುವ ಬಡತನ ರೇಖೆಗಿಂತ ಕೆಳಗಿರುವ ಜನರಿಗೂ ವಿಸ್ತರಿಸುವ ಪ್ರಸ್ತಾಪ ಸರ್ಕಾರದ ಮುಂದಿರುವುದಿಲ್ಲ.

ಅಡಿಕೆಗೆ ಬೆಂಬಲ ಬೆಲೆ

697(850) ಶ್ರೀ ಚಂದ್ರಶೇಖರಪ್ಪ. ಹೆಚ್.ಎಂ. (ಶಿವಮೊಗ್ಗ): ಮಾನ್ಯ ತೋಟಗಾರಿಕೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಅಡಿಕೆಗೆ ಬೆಂಬಲ ಬೆಲೆ ನೀಡುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ; ವಿವರ ತಿಳಿಸುವುದು?

ಶ್ರೀ ಎಂ. ಶಿವಣ್ಣ(ತೋಟಗಾರಿಕೆ ಸಚಿವರು) :

ಅ) ಮಾರುಕಟ್ಟೆ ಮಧ್ಯ ಪ್ರವೇಶ ಯೋಜನೆಯಡಿ ಚಾಲಿ ಅಡಿಕೆಯನ್ನು ಖರೀದಿಸಲು ಪ್ರಸ್ತಾವನೆಯನ್ನು ಭಾರತ ಸರ್ಕಾರಕ್ಕೆ ಸಲ್ಲಿಸಲಾಗಿದೆ. ವಿಷಯವು ಭಾರತ ಸರ್ಕಾರದ ಪರಿಶೀಲನೆಯಲ್ಲಿದೆ.

ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯಿಂದ ರಸ್ತೆ ನಿರ್ಮಾಣ

699(1115) ಶ್ರೀ ಗೋಪಾಲ ಭಂಡಾರಿ. ಹೆಚ್ (ಕಾರ್ಕಳ): ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯು ಸಂಗ್ರಹಿಸಿದ ಹಣದಲ್ಲೇ ಗ್ರಾಮೀಣ ರೈತರಿಗೆ ಕೃಷಿ ಉತ್ಪನ್ನಗಳನ್ನು ಸಾಗಾಣಿಕೆ ಮಾಡಲು ಅನುಕೂಲವಾಗುವಂತೆ ರಸ್ತೆ ನಿರ್ಮಾಣದ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಬಹುದೆ?

ಶ್ರೀ ಬಿ.ಎಸ್. ಪಾಟೀಲ್ (ಸಾಸನೂರು) (ಕೃಷಿ ಮಾರುಕಟ್ಟೆ ಸಚಿವರು) :

ಅ) ಹೌದು. ನಿಯಮಗಳಡಿಯಲ್ಲಿ ಕನಿಷ್ಟ 5.00 ರಿಂದ ಗರಿಷ್ಟ 30.00 ಲಕ್ಷಗಳವರೆಗೆ ಸಮಿತಿಯ ಆದಾಯಕ್ಕನುಗುಣವಾಗಿ ಮಾರುಟ್ಟೆ ಪ್ರಾಂಗಣಕ್ಕೆ ಸಂಪರ್ಕ ಕಲ್ಪಿಸುವ 5 ಕಿ.ಮೀ ಒಳಗಿನ ರಸ್ತೆಯನ್ನು ಹಾಗೂ ಗ್ರಾಮಾಂತರ ಪ್ರದೇಶದಲ್ಲಿ ಲೋಕೋಪಯೋಗಿ, ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್, ಗ್ರಾಮ ಪಂಚಾಯತ್‌ಗೆ ಸೇರಿಲ್ಲದ ರಸ್ತೆಯನ್ನು ಅಭಿವೃದ್ಧಿಪಡಿಸಲು ಅವಕಾಶವಿದೆ.

ರಾಜ್ಯದಲ್ಲಿ ಅಂಗನವಾಡಿ ಕೇಂದ್ರಗಳಿಗೆ ಕಟ್ಟಡಗಳು

700(1116) ಶ್ರೀ ಗೋಪಾಲ ಬಂಡಾರಿ. ಹೆಚ್ (ಕಾರ್ಕಳ): ಮಾನ್ಯ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?